# 77. ಡಿಜಿಟಲ್ ಗ್ರಂಥಾಲಯ ವ್ಯವಸ್ಥೆ: ಕರ್ನಾಟಕ ಮಾದರಿ

ಇಡೀ ದೇಶದಲ್ಲಿ ಮಾದರಿ ಡಿಜಿಟಲ್ ಗ್ರಂಥಾಲಯ ವ್ಯವಸ್ಥೆಯನ್ನು ಹೊಂದಿದ ಮೊದಲ ರಾಜ್ಯ ಕರ್ನಾಟಕ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಹೇಳಿದರು.

ಬೆಂಗಳೂರಿನ ಡಾ: ಶಿವರಾಮ ಕಾರಂತ ನಗರದ 2ನೇ ಹಂತದಲ್ಲಿ ಶಾಖಾ ಗ್ರಂಥಾಲಯಕ್ಕೆ ಶಿಲಾನ್ಯಾಸ ನೆರವೇರಿಸಿ ಮಾತನಾಡಿದ ಅವರು, ತಾವು ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಇಂದಿನ ಅವಶ್ಯಕತೆಗಳಿಗೆ ಅನುಗುಣವಾಗಿ ಡಿಜಿಟಲ್ ಗ್ರಂಥಾಲಯಗಳನ್ನು ಸ್ಥಾಪಿಸಲು ಕ್ರಮ ವಹಿಸಲಾಗಿದೆ ಎಂದರು.

ಕಳೆದ ಆರು ತಿಂಗಳ ಅವಧಿಯಲ್ಲಿ ರಾಜ್ಯದೆಲ್ಲೆಡೆ 272 ಡಿಜಿಟಲ್ ಗ್ರಂಥಾಲಯಗಳು ಕಾರ್ಯಾರಂಭ ಮಾಡಿದ್ದು, ಇಡೀ ದೇಶದಲ್ಲಿ ಇದು ಅಭೂತ ಪ್ರಯತ್ನವಾಗಿದೆ. ಕೋವಿಡ್ ಸೃಷ್ಟಿಸಿದ ಸಾಮಾಜಿಕ ಪರಿಸ್ಥಿತಿ ಹಿನ್ನೆಲೆಯಲ್ಲಿ ರಾಷ್ಟ್ರದಲ್ಲಿಯೇ ಮೊದಲ ಉಪಕ್ರಮವಾಗಿ ಕರ್ನಾಟಕ ರಾಜ್ಯದ ಸಾರ್ವಜನಿಕ ಗ್ರಂಥಾಲಯ ಇಲಾಖೆ ಡಿಜಿಟಲ್ ಗ್ರಂಥಾಲಯ ಮೊಬೈಲ್ ಆ್ಯಪ್ ಲೋಕಾರ್ಪಣೆಗೊಳಿಸಿದ್ದು, ಇಂದು ನಾಲ್ಕು ಲಕ್ಷಕ್ಕೂ ಹೆಚ್ಚು ಜನ ಈ ಆ್ಯಪ್ ಬಳಸುತ್ತಿದ್ದಾರೆ. ಒಂದು ಲಕ್ಷಕ್ಕೂ ಮೀರಿದ ಪುಸ್ತಕಗಳು ಈ ಆ್ಯಪ್‌ನಲ್ಲಿ ಲಭ್ಯವಿದೆ. ಈ ತನಕ 15 ಲಕ್ಷ ಜನರು ಇದರ ಉಪಯೋಗ ಪಡೆದಿದ್ದಾರೆ ಎಂದು ಹೇಳಿದರು.

ಪುಸ್ತಕ ಸಂಸ್ಕೃತಿ ಬೆಳೆಸಲು ರಾಜ್ಯಾದ್ಯಾಂತ 6841 ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇದು ದೇಶದಲ್ಲಿಯೇ ಮಾದರಿ ಗ್ರಂಥಾಲಯ ವ್ಯವಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಮುಂದಿನ ದಿನಗಳಲ್ಲಿ ಎಲ್ಲ ವರ್ಗದ ಜನರ ಜ್ಞಾನಾರ್ಜನೆಗೆ ಉಪಯೋಗವಾಗುವಂತೆ ಗ್ರಂಥಾಲಯಗಳಲ್ಲಿ ಅವಶ್ಯಕ ಸೇವೆಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಆಧಾರ:ವಿಶ್ವವಾಣಿ, ದಿನಾಂಕ;25.08.2020